**ಶ್ರೀಮತಿ ಪಿ.ಸರಸಾಬಾಯಿ ರವರು ಸರ್ವೆ ನಂ-30 ಬೆಳಗಲ್ಲು ಗ್ರಾಮ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ 18.33 ಹೆಕ್ಟರ್ ಪ್ರದೇಶದಲ್ಲಿ ಪ್ರತಿ ವರ್ಷಕ್ಕೆ 36,225 ಟನ್ ಸಾಮರ್ಥ್ಯದ ಬಿಳಿ ಸ್ಪಟಿಕಶಿಲೆಗಳ ಗಣಿಗಾರಿಕೆ ನಡೆಸುವ ಸಲುವಾಗಿ ದಿನಾಂಕ 05-01-2021 ರಂದು ಪೂರ್ವಾಹ್ನ 11:00ಗಂಟೆಗೆ (ಯೋಜನಾ ಪ್ರದೇಶದಲ್ಲಿ) ನಡೆದ ಪರಿಸರ ಸಾರ್ವಜನಿಕ ಸಭೆಯ ನಡುವಳಿಗಳು:-**

| | | |
|---|---|---|
| ಪರಿಸರ ಕುರಿತಾದ ಸಾರ್ವಜನಿಕ ಆಲಿಕೆ ಸಭೆಯ ಸ್ಥಳ | | ಯೋಜನಾ ಸ್ಥಳ: ಶ್ರೀ. ಪಿ ಸರಸಾಬಾಯಿ ರವರ ಸರ್ವೇ ನಂ. 30 ಬೆಳಗಲ್ಲು ಗ್ರಾಮ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ. |
| ಹಾಜರಿದ್ದ ಪರಿಸರ ಸಾರ್ವಜನಿಕ ವಿಚಾರಣಾ ಸಮಿತಿಯ ಸದಸ್ಯರುಗಳ ವಿವರ | | **ಪದನಾಮ** |
| 1. | ಶ್ರೀ ಪಿ.ಎಸ್. ಮಂಜುನಾಥ, ಕೆ.ಎ.ಎಸ್.,(ಹಿರಿಯ ಶ್ರೇಣಿ) ಮಾನ್ಯ ಅಪರ ಜಿಲ್ಲಾಧಿಕಾರಿಗಳು ಮತ್ತು ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಜಿಲ್ಲೆ ಬಳ್ಳಾರಿ. | **ಅಧ್ಯಕ್ಷರು** |
| 2 | ಶ್ರೀ ಕೆ.ರಾಜು, ಹಿರಿಯ ಪರಿಸರ ಅಧಿಕಾರಿಗಳು, ಕ.ರಾ.ಮಾ.ನಿ.ಮಂ. ವಲಯ ಕಛೇರಿ, ಬಳ್ಳಾರಿ. | **ಸದಸ್ಯರು** |
| 3. | ಶ್ರೀ ಉಮಾಶಂಕರ್ ಪಿ. ಕೆ, ಪರಿಸರ ಅಧಿಕಾರಿ, ಕ.ರಾ.ಮಾ.ನಿ.ಮಂ. ಬಳ್ಳಾರಿ. | **ಸದಸ್ಯ ಸಮಾವೇಷಕರು** |
| **ಸಭೆಯಲ್ಲಿ ಹಾಜರಿದ್ದ ಇತರ ಅಧಿಕಾರಿಗಳ ವಿವರ** | | |
| 1 | ಶ್ರೀ ಜಿ. ಆರ್. ಕಿರಣ್ ಕುಮಾರ್, ಉಪ ಪರಿಸರ ಅಧಿಕಾರಿ, ಕ.ರಾ.ಮಾ.ನಿ.ಮಂ., ಪ್ರಾಕ, ಬಳ್ಳಾರಿ | |
| 2 | ಶ್ರೀ ಪವನ್ ಎಸ್, ಸಹಾಯಕ ಪರಿಸರ ಅಧಿಕಾರಿ, ಕ.ರಾ.ಮಾ.ನಿ.ಮಂ. ಪ್ರಾಕ, ಬಳ್ಳಾರಿ | |
| 3 | ಶ್ರೀ ಹನುಮಂತಪ್ಪ ಹೆಚ್. ಸಹಾಯಕ ಪರಿಸರ ಅಧಿಕಾರಿ, ಕ.ರಾ.ಮಾ.ನಿ.ಮಂ. ಪ್ರಾಕ, ಬಳ್ಳಾರಿ | |
| **ಸಭೆಯಲ್ಲಿ ಹಾಜರಿದ್ದ ಇತರ ಅಧಿಕಾರಿಗಳ ವಿವರ** | | |
| 1 | ಶ್ರೀ ಈ ಶ್ರೀನಿವಾಸ, ಕಂದಾಯ ನಿರೀಕ್ಷಕರು ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ | |
| 2 | ಶ್ರೀ ಮೌನೇಶ, ಗ್ರಾಮ ಲೆಕ್ಕಾಧಿಕಾರಿ, ಬಿ.ಬೆಳಗಲ್ಲು ಗ್ರಾಮ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ | |
| **ಶ್ರೀ. ಪಿ.ಸರಸಾಭಾಯಿ ರವರ ಉದ್ದಿಮೆಯ ವತಿಯಿಂದ ಸಭೆಯಲ್ಲಿ ಹಾಜರಿದ್ದ ಪ್ರತಿನಿಧಿಗಳು .** | | |
| 1. | ಶ್ರೀಮತಿ ಸರಸಾ ಭಾಯಿ, ಮಾಲೀಕರು | |
| 2. | ಶ್ರೀ ಆರ್. ಚಂದ್ರ ನಾಯ್ಕ, ಪಾಲುದಾರರು | |
| 3. | ಶ್ರೀ ಎಸ್. ಪ್ರಕಾಶ ಪಾಲುದಾರರು | |
| 4. | ಶ್ರೀ ಸಂಜೀವ, ಪಾಲುದಾರರು | |
| 5 | ಶ್ರೀ ಎಸ್.ಪಿ. ಮಧೂಸೂಧನ್, ಪಾಲುದಾರರು | |
| 6 | ಶ್ರೀ ಸಿ. ಮೋಹನ್, ಪಾಲುದಾರರು. | |
| 1. | ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಅಧಿಕಾರಿಗಳ ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ-1** ರಲ್ಲಿ ಲಗತ್ತಿಸಲಾಗಿದೆ. | |
| **2.** | ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಸಾರ್ವಜನಿಕರ ವಿಳಾಸ ಮತ್ತು ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ-2** ರಲ್ಲಿ ಲಗತ್ತಿಸಲಾಗಿದೆ. | |

**ಪೀಠಿಕೆ**

ಶ್ರೀಮತಿ ಪಿ.ಸರಸಾ ಭಾಯಿ ರವರು ಬೆಳಗಲ್ಲು ಗ್ರಾಮದ, ಸರ್ವೇ ನಂ.30 ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ 18.33 ಎಕ್ಟೇರ್ ಪ್ರದೇಶದಲ್ಲಿ ಪ್ರತಿ ವರ್ಷಕ್ಕೆ 36,225 ಟನ್ ಸಾಮರ್ಥ್ಯದ ಬಿಳಿ ಸ್ಪಟಿಕಶಿಲೆಗಳ ಗಣಿಗಾರಿಕೆಯನ್ನು ಮಾಡಲು ಉದ್ದೇಶಿಸಿರುತ್ತಾರೆ.

ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ಇವರು ಪರಿಸರ (ಸಂರಕ್ಷಣೆ) ಕಾಯ್ದೆ 1986 ಅಡಿಯಲ್ಲಿ ದಿನಾಂಕ : 14.09.2006 ರಲ್ಲಿ ಜಾರಿಗೊಳಿಸಿರುವ ಪರಿಸರ ಅಘಾತ ಅಧ್ಯಯನದ ಅಧಿಸೂಚನೆ (ತಿದ್ದುಪಡಿ ದಿನಾಂಕ : 01.12.2009) ರನ್ವಯ ಯೋಜನಾ ಪ್ರವರ್ತಕರು ಸದರಿ ಯೋಜನೆಗೆ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುತ್ತದೆ.

ಸದರಿ ಉದ್ದೇಶಿತ ಯೋಜನೆಯು ಮೇಲೆ ತಿಳಿಸಿದ ಅಧಿಸೂಚನೆ ಅನ್ವಯ ಪ್ರವರ್ಗ–ಬಿ 1 ರಡಿಯಲ್ಲಿ ಒಳಪಡುವುದರಿಂದ ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ರಾಜ್ಯದಲ್ಲಿ ಸ್ಥಾಪಿತವಾಗಿರುವ ರಾಜ್ಯ ಪರಿಸರ ಆಘಾತ ನಿರ್ಧರಣಾ ಪ್ರಾಧಿಕಾರದಿಂದ (State Environnemental Impact Assessment Authority (SEIAA))ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುತ್ತದೆ.

ಆ ಮೇರೆಗೆ ಯೋಜನಾ ಪ್ರವರ್ತಕರು ಪರಿಸರ ವಿಮೋಚನಾ ಪತ್ರವನ್ನು ಪಡೆಯಲು ರಾಜ್ಯ ಮಟ್ಟದ ಪರಿಸರ ಆಘಾತ ಅಧ್ಯಯನ ಪ್ರಾಧಿಕಾರಕ್ಕೆ ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿಯವರು ಸಲ್ಲಿಸಿರುವ ಅರ್ಜಿಯನ್ನು ರಾಜ್ಯ ಮಟ್ಟದ ಪರಿಸರ ಆಘಾತ ನಿರ್ಧರಣಾ ಪ್ರಾಧಿಕಾರದ ಅಡಿಯಲ್ಲಿ ಬರುವ ರಾಜ್ಯ ಮಟ್ಟದ ಅಘಾತ ಅಧ್ಯಯನ ಪ್ರಾಧಿಕಾರ, ಕರ್ನಾಟಕ ಇವರು ಸದರಿ ಯೋಜನೆಯ Terms of Reference (TOR) ಅಂತಿಮಗೊಳಿಸಿ ಪ್ರಸ್ತಾವನೆಯನ್ನು ಪರಿಗಣಿಸಿದೆ. ಮಾನ್ಯ ಎನ್.ಜಿ.ಟಿ. ಆದೇಶದ ದಿನಾಂಕ : 13–09–2018 ಮತ್ತು 11–12–2018 ರನ್ವಯ ಸದರಿ ಯೋಜನೆಯನ್ನು ಬಿ–1 ವರ್ಗವೆಂದು ಪರಿಗಣಿಸಲಾಗಿದೆ. ಈ ಯೋಜನೆಯ ಪ್ರಸ್ತಾಪವನ್ನು ಕರ್ನಾಟಕದ ಎಸ್.ಇ.ಎ.ಸಿ. ಸಭೆಯಲ್ಲಿ ದಿನಾಂಕ : 17–10–2019 ರಂದು ನಡೆಸಲಾಯಿತು. ಕೆ.ಎಸ್.ಇ.ಎ.ಸಿ ಕರ್ನಾಟಕ ಇ.ಐ.ಎ/ಇ.ಎಂ.ಪಿ. ವರದಿಗಳನ್ನು ತಯಾರಿಸಲು ಮತ್ತು ಸಾರ್ವಜನಿಕರ ಸಭೆ ನಡೆಸಲು ತನ್ನ SEIA 374 MIN 2019 ದಿನಾಂಕ : 21–12–2019 ರ ಮೂಲಕ ಟರ್ಮ್ಸ್ ಆಫ್ ರೆಫರೆನ್ಸ್ ನೀಡಿತ್ತು ಈ ಷರತ್ತುಬದ್ಧ ನಿಬಂಧನೆಗಳ ಅನ್ವಯ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸುವುದು ಕಡ್ಡಾಯವಾಗಿರುತ್ತದೆ.

ಯೋಜನಾ ಪ್ರವರ್ತಕರು ಷರತ್ತುಬದ್ಧ ನಿಬಂಧನೆಗಳನ್ನು ಪಾಲಿಸುವ ಸಲುವಾಗಿ ಮೆ.ಹೊರಿಜನ್ ವೆಂಚರ್ಸ್ ಬೆಂಗಳೂರು ಇವರು ತಯಾರಿಸಿದ ಕ್ಷಿಪ್ರ ಪರಿಸರ ಆಘಾತ ಅಂದಾಜು ಅಧ್ಯಯನ ವರದಿ ಮತ್ತು ಕಾರ್ಯಕಾರಿ ಸಾರಾಂಶವನ್ನು ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಸಿದ್ಧಪಡಿಸಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸಿಕೊಡಲು ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು ಇವರಿಗೆ ದಿನಾಂಕ 12–05–2020 ರಂದು ಮನವಿ ಸಲ್ಲಿಸಿರುತ್ತಾರೆ.

ಯೋಜನಾ ಪ್ರವರ್ತಕರ ಸದರಿ ಮನವಿಯ ಮೇರೆಗೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯವತಿಯಿಂದ ಜಿಲ್ಲಾಧಿಕಾರಿಗಳು, ಬಳ್ಳಾರಿಇವರಿಗೆ ಪರಿಸರ ಸಾರ್ವಜನಿಕ ಆಲಿಕಾ ಸಭೆ ನಡೆಸಲು ಸೂಕ್ತ ದಿನಾಂಕ ಹಾಗೂ ಸಮಯವನ್ನು ನೀಡಲು ದಿನಾಂಕ 19-06-2020 ಪತ್ರದ ಮೂಲಕ ಕೋರಲಾಗಿರುತ್ತದೆ.ಸದರಿ ಘಟಕದವರಿಗೆ ಗಣಿ ಗುತ್ತಿಗೆಯನ್ನು ನೀಡುವಂತೆ ತಿಳಿಸಲಾಗಿತ್ತು. ಅದರನ್ವಯ ಯೋಜನಾದಾದರು ದಾಖಲಾತಿಗಳನ್ನು ಸಲ್ಲಿಸಿದ ನಂತರ ಪರಿಸರ ಸಾರ್ವಜನಿಕ ಸಭೆ ನಡೆಸಲು ತೀರ್ಮಾನಿಸಲಾಯಿತು.

ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ ರವರ ಅಧಿಕೃತ ಜ್ಞಾಪನ ಪತ್ರ ದಿನಾಂಕ: 13-11-2020 ರ ಅನ್ವಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು ಬಳ್ಳಾರಿ ಇವರಿಗೆ ಅಧಿಕಾರ ನೀಡಿ ಪರಿಸರ ಸಾರ್ವಜನಿಕ ಸಭೆಯನ್ನು ನಡೆಸಲು ಕ್ರಮವಹಿಸಲು ತಿಳಿಸಿರುತ್ತಾರೆ. ಪ್ರತಿಯನ್ನು **ಅನುಭಂದ -03** ರಂತೆ ಲಗತ್ತಿಸಿದೆ. ಅದರನ್ವಯ ಅಪರ ಜಿಲ್ಲಾಧಿಕಾರಿಗಳು ದಿನಾಂಕ : 05-01-2021 ರಂದು ಬೆಳಿಗ್ಗೆ 11:00 ಗಂಟೆಗೆ ಯೋಜನಾ ಸ್ಥಳದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ಸಮ್ಮತಿ ಸೂಚಿಸಿರುತ್ತಾರೆ. ಈ ಸಭೆಗೆ ಪೂರಕವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಾಜ್ಯ ಮಟ್ಟದ ಪ್ರಮುಖ ದಿನ ಪತ್ರಿಕೆಗಳಾದ ವಿಜಯವಾಣಿ (ಕನ್ನಡ) ಹಾಗೂ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೇಸ್ (ಆಂಗ್ಲ) ಗಳಲ್ಲಿ ದಿನಾಂಕ 05-12-2020ರಂದು ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. ಹಾಗೂ ಬಳ್ಳಾರಿ ಜಿಲ್ಲೆಯ ಸ್ಥಳೀಯ ದಿನಪತ್ರಿಕೆಯಾದ "ಈ ನಮ್ಮ ಕನ್ನಡ ನಾಡು ಸ್ವತಂತ್ರ ಹೋರಾಟ" ಪತ್ರಿಕೆಯಲ್ಲಿ ಸಹ ದಿನಾಂಕ: 07-12-2020 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಕುರಿತಾದ ಪ್ರಕಟಣೆಯನ್ನು ನೀಡಲಾಗಿರುತ್ತದೆ. ಈ ಯೋಜನೆಗೆ ಸಂಬಂಧಿಸಿದಂತೆ ಸಾರ್ವಜನಿಕರ ಅನಿಸಿಕೆ/ಆಕ್ಷೇಪಣೆ/ಸೂಚನೆ/ ಸಲಹೆ/ಅಭಿಪ್ರಾಯಗಳನ್ನು ಲಿಖಿತವಾಗಿ 30 ದಿನಗಳ ಒಳಗೆ ಸಲ್ಲಿಸಲು ಕೋರಲಾಗಿರುತ್ತದೆ.

ಸದರಿ ಯೋಜನೆಗೆ ಸಂಬಂಧಿಸಿದಂತೆ ಯೋಜನಾ ಪ್ರವರ್ತಕರು ಸಲ್ಲಿಸಿದ್ದ ಕ್ಷಿಪ್ರ ಪರಿಸರ ಆಘಾತ ಅಂದಾಜು ಅಧ್ಯಯನದ ವರದಿ ಮತ್ತು ಕಾರ್ಯಕಾರಿ ಸಾರಂಶದ ಕನ್ನಡ ಮತ್ತು ಆಂಗ್ಲ ಭಾಷೆಯ ಪ್ರತಿಗಳನ್ನು ಈ ಕೆಳಕಂಡ ಸ್ಥಳಗಳಲ್ಲಿ ಸಾರ್ವಜನಿಕರ ಪರಾಮರ್ಶೆಗೆ ಇಡಲಾಗಿತ್ತು.

- ಮಾನ್ಯ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬಳ್ಳಾರಿ,
- ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಪಂಚಾಯತ್, ಬಳ್ಳಾರಿ.
- ಜಿಲ್ಲಾ ಕೈಗಾರಿಕಾ ಕೇಂದ್ರ, ಬಳ್ಳಾರಿ.
- ಗ್ರಾಮ ಪಂಚಾಯತಿ ಕಾರ್ಯಾಲಯ, ಬೆಳಗಲ್ಲು ಗ್ರಾಮ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ
- ವಿಭಾಗಿಯ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬಳ್ಳಾರಿ.
- ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬಳ್ಳಾರಿ.
- ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಅರಣ್ಯ, ಜೀವಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

- ಸಹಾಯ ಕೇಂದ್ರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು

ಯೋಜನಾ ಪ್ರದೇಶದ ಸುತ್ತಮುತ್ತಲಿನ ಸಾರ್ವಜನಿಕರಿಗೆ ಉದ್ದೇಶಿತ ಗಣಿಗಾರಿಕೆಯ ಸ್ಥಾಪನೆ ಕುರಿತು ಹಾಗು ಸಾರ್ವಜನಿಕ ಆಲಿಕಾ ಸಭೆ ನಡೆಯುವ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಪಂಚಾಯತಿ ಕಾರ್ಯಾಲಯ (ಬೆಳಗಲ್ಲು) ಹಾಗೂ ಸುತ್ತಮುತ್ತಲಿನ ಹಳ್ಳಿಗಳಾದ (ಬೆಳಗಲ್ಲು, ಬೆಳಗಲ್ ತಾಂಡಾ, ಜಾನೆಕುಂಟೆ, ಜಾನೆಕುಂಟೆ ತಾಂಡಾ, ಹರಗಿನಡೋಣಿ) ಗಳಲ್ಲಿ ಕರ ಪತ್ರಗಳನ್ನುಹಂಚಲಾಗಿದ್ದು ಮತ್ತು ಧ್ವನಿವರ್ಧಕಗಳ ಮೂಲಕವು ಸಹ ಪ್ರಚಾರವನ್ನು ದಿನಾಂಕ 02—01-2021 ರಂದು ಮಾಡಲಾಗಿರುತ್ತದೆ. ಛಾಯಾ ಚಿತ್ರಗಳನ್ನು **ಅನುಭಂದ-06** ರಲ್ಲಿ ಲಗತ್ತಿಸಿದೆ.

ಮೇಲೆ ತಿಳಿಸಿದ ಅಧಿಸೂಚನೆಯಲ್ಲಿನ ಎಲ್ಲಾ ವಿಧಿ-ವಿಧಾನಗಳನ್ನು ಕ್ರಮಬದ್ಧವಾಗಿ ನಿಯಮಾನುಸಾರ ಪಾಲಿಸಿ ದಿನಾಂಕ 05-01-2021ರಂದು ಪೂರ್ವಾಹ್ನ 11.00 ಗಂಟೆಗೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಅಪರ ಜಿಲ್ಲಾಧಿಕಾರಿಗಳು, ಬಳ್ಳಾರಿ ಇವರ ಅಧ್ಯಕ್ಷತೆಯಲ್ಲಿ ಯೋಜನಾ ಸ್ಥಳವಾದ ಶ್ರೀ. ಪಿ ಸರಸಾಬಾಯಿ ರವರ ಸರ್ವೆ ನಂ. 30 ಬೆಳಗಲ್ಲು ಗ್ರಾಮ , ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ ಪ್ರಾರಂಭಿಸಲಾಯಿತು.

## ಸಭೆಯ ನಡವಳಿಗಳು

ಸದಸ್ಯ ಸಮಾವೇಷಕರು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ, ಬಳ್ಳಾರಿ ಪ್ರಾದೇಶಿಕ ಕಛೇರಿಯ ಪರಿಸರ ಅಧಿಕಾರಿಗಳಾದ ಶ್ರೀ ಉಮಾಶಂಕರ್ ಪಿ.ಕೆ. ಅವರು ಶ್ರೀ ಪಿ.ಎಸ್.ಮಂಜುನಾಥ, ಕೆ.ಎ.ಎಸ್. (ಹಿರಿಯ ಶ್ರೇಣಿ) ಅಪರ ಜಿಲ್ಲಾಧಿಕಾರಿಗಳು ಮತ್ತು ಅಪರ ಜಿಲ್ಲಾ ದಂಡಾಧಿಕಾರಿಗಳು ಮತ್ತು ಶ್ರೀ ಕೆ.ರಾಜು ಹಿರಿಯ ಪರಿಸರ ಅಧಿಕಾರಿ ಅವರಿಗೆ ಸ್ವಾಗತ ಕೋರಿದರು. ಮೆ.ಶ್ರೀಮತಿ ಸರಸಾಬಾಯಿ.ರವರ ಕಂಪನಿಯ ಪ್ರತಿನಿಧಿಗಳಿಗೆ, ಅಧಿಕಾರಿಗಳಿಗೆ, ಎಲ್ಲಾ ಸಾರ್ವಜನಿಕರಿಗೆ, ಪತ್ರಕರ್ತರಿಗೆ ಹಾಗೂ ಇತರೆ ಇಲಾಖೆಯ ಅಧಿಕಾರಿಗಳಿಗೆ ಸ್ವಾಗತ ಕೋರಿದರು ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ಕೇಂದ್ರ ಸರ್ಕಾರ, ಇವರು ಪರಿಸರ(ಸಂರಕ್ಷಣೆ)ಕಾಯ್ದೆ, 1986 ರಡಿಯಲ್ಲಿ ದಿನಾಂಕ : 14-09-2006 ರಲ್ಲಿ ಜಾರಿಗೊಳಿಸಿರುವ ಪರಿಸರ ಅಘಾತ ಅಧ್ಯಯನದ ಅಧಿಸೂಚನೆ ಬಗ್ಗೆ ಸಂಕ್ಷಿಪ್ತವಾಗಿ ವಿವರಣೆ ನೀಡಿದರು. ಸದರಿ ಯೋಜನೆಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುವ ವಿಷಯವನ್ನು ಸಹ ಸಭೆಗೆ ತಿಳಿಸಿದರು. ಸಾರ್ವಜನಿಕ ಪರಿಸರ ಆಲಿಕೆ ಸಭೆಯ ಪೂರ್ವದಲ್ಲಿ ನಿಯಮಾನುಸಾರ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆಯನ್ನು ನೀಡಿದರು ಹಾಗೂ ಸಾರ್ವಜನಿಕ ಆಲಿಕೆಯ ಸಭೆಯ ಅಧ್ಯಕ್ಷತೆಯನ್ನು ವಹಿಸುವಂತೆ ಮತ್ತು ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಪರ ಜಿಲ್ಲಾಧಿಕಾರಿಗಳನ್ನು ಕೋರಿದರು.

ಶ್ರೀ ಪಿ.ಎಸ್.ಮಂಜುನಾಥ, ಕೆ.ಎ.ಎಸ್. (ಹಿರಿಯ ಶ್ರೇಣಿ) ಅಪರ ಜಿಲ್ಲಾಧಿಕಾರಿಗಳು ಮತ್ತು ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರು ಸಭೆಯನ್ನು ಉದ್ದೇಶಿಸಿ ಯೋಜನೆಗೆ ಪರಿಸರ ಸಾರ್ವಜನಿಕ ವಿಚಾರಣೆಯನ್ನು ನಡೆಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಪರಿಸರ ಅಘಾತ

ಅಧ್ಯಯನ ಅಧಿಸೂಚನೆ ದಿನಾಂಕ: 14-09-2006 ರ ಬಗ್ಗೆ ವಿವರವಾದ ಮಾಹಿತಿಯನ್ನು ಸಭೆಯಲ್ಲಿದ್ದ ಸಾರ್ವಜನಿಕರಿಗೆ ತಿಳಿಸಿದರು ಹಾಗೂ ಪರಿಸರ ಸಾರ್ವಜನಿಕ ವಿಚಾರಣೆಯ ಅಗತ್ಯತೆಯನ್ನು ಸಂಕ್ಷಿಪ್ತವಾಗಿ ವಿವರಿಸಿದರು.

ಪ್ರಸ್ತಾವಿತ ಯೋಜನೆಯ ಪವರ್ ಪಾಯಿಂಟ್ ಪ್ರಸ್ತುತಿಯನ್ನು ನೀಡುವಂತೆ ಅವರು ಯೋಜನಾ ಪ್ರತಿಪಾದಕರಿಗೆ ಮಾಹಿತಿ ನೀಡಿದರು, ಅಲ್ಲಿ ವಿಚಾರಣೆಗೆ ಹಾಜರಿದ್ದ ಸಾರ್ವಜನಿಕರು ಪರಿಸರ ಸಮಸ್ಯೆಗಳ ಕುರಿತು ಉದ್ದೇಶಿತ ಯೋಜನೆಗೆ ತಮ್ಮ ಎಲ್ಲಾ ಅಭಿಪ್ರಾಯ/ಸಲಹೆ/ಪತ್ರಗಳನ್ನು ಯೋಜನೆಯ ಬಗ್ಗೆ ಲಿಖಿತ ಅಥವಾ ಮೌಖಿಕವಾಗಿ ಪ್ರಸ್ತುತಪಡಿಸುವಂತೆ ವಿನಂತಿಸಿಕೊಂಡರು. ಈ ನಡವಳಿಯು ಲಿಖಿತ ದಾಖಲೆ ಮತ್ತು ವಿಡಿಯೋಗ್ರಾಫಿ ಎರಡನ್ನು ಒಳಗೊಂಡಿದೆ ಎಂದು ಸಭೆಗೆ ತಿಳಿಸಿದರು.

ಅದರಂತೆ, ಮೆ. ಶ್ರೀಮತಿ ಪಿ ಸರಸಾಬಾಯಿ. ಕಂಪನಿ ಪರವಾಗಿ ಶ್ರೀ ಸಚಿನ್ ಮೆ. ಹೊರಿಜನ್ ವೆಂಚರ್ಸ್ ಬೆಂಗಳೂರು. ಇವರು ಉದ್ದೇಶಿತ ಯೋಜನೆಗೆ ಸಂಬಂಧಿಸಿದಂತೆ ಸಿದ್ಧಪಡಿಸಿರುವ ಕ್ಷಿಪ್ರ ಪರಿಸರ ಆಘಾತ ಅಂದಾಜು ಅಧ್ಯಯನ ವರದಿಯ ಕಾರ್ಯಕಾರಿ ಸಾರಾಂಶಗಳಾದ ಯೋಜನೆ ಪ್ರಸ್ಥಾವನೆ, ಸರ್ಕಾರದ ಮಂಜೂರಾತಿಗಳು, ಗಣಿ ಕೆಲಸದ ಪೋಟೊಗಳು, ಪರಿವೀಕ್ಷಣೆಯ ಸ್ಥಳಗಳ ನಕ್ಷೆ, ದೂಳು/ವಾಯು ಗುಣಮಟ್ಟ, ದೂಳಿನ ಗುಣಮಟ್ಟ ಸುಧಾರಿತ ಕ್ರಮಗಳು, ಶಬ್ಧದ ಮಟ್ಟದ ಸುಧಾರಿತ ಕ್ರಮಗಳು, ನೀರಿನ ಗುಣಮಟ್ಟ ಸುಧಾರಿತ ಕ್ರಮಗಳು, ಮಣ್ಣಿನ ಗುಣಮಟ್ಟದ ಸುಧಾರಿತ ಕ್ರಮಗಳು, ಜಮೀನಿನ ಬಳಕೆ, ಸಸ್ಸೀಕರಣ ಪೋಟೊಗಳು, ಗಣಿ ಗುತ್ತಿಗೆ ಪ್ರದೇಶದೊಳಗಿನ ರಕ್ಷಣಾತ್ಮಕ ಕ್ರಮಗಳ ಪೋಟೊ, ಗಣಿ ಗುತ್ತಿಗೆ ಹೊರ ಪ್ರದೇಶದ ರಕ್ಷಣಾತ್ಮಕ ಕ್ರಮಗಳ ಪೋಟೊ, ಪರಿಸರ ರಕ್ಷಣೆಯ ಬಜೆಟ್, ಸಿ.ಎಸ್.ಆರ್. ಚಟುವಟಿಕೆಗಳನ್ನೊಳಗೊಂಡ ವಿವರಗಳನ್ನು ಪವರ್ ಪಾಯಿಂಟ್ ಮೂಲಕ ಸಭೆಗೆ ಮಂಡಿಸಿದರು.

ಸಭೆಯ ಅಧ್ಯಕ್ಷರು ಈ ಉದ್ದೇಶಿತ ಯೋಜನೆಯ ಬಗ್ಗೆ ಪರಿಸರ ಕುರಿತಾಗಿ ಯಾವುದೇಸಲಹೆ/ಅನಿಸಿಕೆ/ಅಭಿಪ್ರಾಯ/ಸೂಚನೆಗಳು ಯಾವುದಾದರೂ ಇದ್ದಲ್ಲಿ ಸಭೆಗೆ ಮಂಡಿಸುವಂತೆ ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರನ್ನು ಕೋರಿದರು.

**ಆ ಮೇರೆಗೆ ಸಾರ್ವಜನಿಕರು ಯೋಜನೆಯ ಬಗ್ಗೆ ತಮ್ಮ ಸಲಹೆ/ಅನಿಸಿಕೆ/ಅಭಿಪ್ರಾಯ/ಸೂಚನೆಗಳನ್ನು ಈ ಕೆಳಕಂಡಂತೆ ಮಂಡಿಸಿದರು.**

1. **ಶ್ರೀ ಗೋಪಿನಾಯ್ಕ ಜಾನುಕುಂಟೆ ತಾಂಡಾ ಗ್ರಾಮ,** ಇವರು ಮಾತನಾಡುತ್ತಾ, ದೇಶದ ಅಭಿವೃದ್ಧಿ ಹೊಂದಬೇಕಾದರೆ ಲಭ್ಯವಿರುವ ಸಂಪನ್ಮೂಲಗಳನ್ನು ಸರಿಯಾಗಿ ಬಳಕೆ ಮಾಡಿಕೊಳ್ಳುವುದರಿಂದ ದೇಶ ಅಭಿವೃದ್ಧಿಯಾಗುತ್ತದೆ ಎಂದು ತಿಳಿಸಿದಿರು. ಮುಂದುವರೆಯುತ್ತಾ, ಪಂಚವಾರ್ಷಿಕ ಯೋಜನೆಗಳ ಬಗ್ಗೆ ಪ್ರಸ್ತಾಪಿಸಿ ಮೊದಲನೆ ಪಂಚವಾರ್ಷಿಕ ಯೋಜನೆಯಲ್ಲಿ ಕೃಷಿಗೆ ಮೊದಲ ಆದ್ಯತೆ ನೀಡಲಾಯಿತು. ಹಾಗೂ ಎರಡನೇ ಪಂಚವಾರ್ಷಿಕ ಯೋಜನೆಯಲ್ಲಿ ಕೈಗಾರಿಕೆಗಳಿಗೆ ಆದ್ಯತೆ ನೀಡಲಾಯಿತು ಎಂದು ತಿಳಿಸಿ ಲಭ್ಯವಿರುವ ಸಂಪನ್ಮೂಲಗಳನ್ನು ಯೋಜನಾಬದ್ಧವಾಗಿ ಬಳಸಿದರೆ ದೇಶದ ಅಭಿವೃದ್ಧಿ ಯಾಗುತ್ತದೆ ಎಂದು ಮತ್ತೊಮ್ಮೆ ಪುನರುಚ್ಚರಿಸಿದರು. ಕೈಗಾರಿಕೆಯಿಂದ ಸುತ್ತ-ಮುತ್ತಲಿನ ಜನರಿಗೆ ಉದ್ಯೋಗ ಸಿಕ್ಕಿದೆ ಹಾಗೂ ಮುಂದೆಯು ಸಿಗುತ್ತದೆ. ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಿ ಗಿಡಗಳನ್ನು ಬೆಳೆಸುವಂತೆ ತಿಳಿಸಿ

ಸದರಿ ಯೋಜನೆಯನ್ನು ಸ್ವಾಗತಸಿದರು. ಯೋಜನೆಯಿಂದ ಗ್ರಾಮ ಪಂಚಾಯತಿಗೆ ಆದಾಯ ಬರುತ್ತದೆ ಎಂದು ತಿಳಿಸಿದರು.

2. **ಶ್ರೀ ಬಾಬು ಸಿದ್ದಲಿಂಗಪ್ಪ ಜಾನುಕುಂಟೆ ಗ್ರಾಮ,** ಇವರು ಮಾತನಾಡುತ್ತಾ,, ಯೋಜನೆಯ ಸಮೀಪದಲ್ಲಿರುವ 05 ಹಳ್ಳಿಗಳ ರೈತ ಬಾಂಧವರಿಗೆ ಮೊದಲ ಆದ್ಯತೆ ನೀಡುವಂತೆ ಕೋರಿದರು. 05 ಹಳ್ಳಿಗಳ ಜನರಿಗೆ ಉದ್ಯೋಗ ಕೊಡುವಂತೆ ಧೂಳು ಬಂದರು ಪರಿಹಾರ ಕೊಟ್ಟಿಲ್ಲ. ಸುತ್ತಮುತ್ತಲ ರೈತರಿಗೆ ಅನುಕೂಲ ಆದ ನಂತರ ಗಣಿಗಾರಿಕೆ ಪರವಾನಿಗೆ ನೀಡುವಂತೆ ತಿಳಿಸಿದರು.

3. **ಶ್ರೀ ಹೆಚ್ ಜಮ್ಮನಗೌಡ ಬಿ.ಬೆಳಗಲ್ಲು ಗ್ರಾಮ,**ಇವರು ಮಾತನಾಡುತ್ತಾ, ಸದರಿ ಗಣಿಗಾರಿಕೆ ನಡೆಸುವ ಪ್ರದೇಶದ ಸಮೀದಲ್ಲಿಯೇ ತಮ್ಮ ಒಡೆತನದ ಕರಿಬೇವಿನ ತೋಟವಿದ್ದು ಗಣಿಗಾರಿಕೆ ನಡೆಸುವುದರಿಂದ ಧೂಳು ಉಂಟಾಗಿ ತಮ್ಮ ಕರಿಬೇವಿನ ತೋಟಕ್ಕೆ ಹಾನಿಯುಂಟಾಗುತ್ತದೆ ಎಂದು ತಿಳಿಸಿ, ಪ್ರಸ್ತಾಪಿತ ಗಣಿಗಾರಿಕೆಯನ್ನು ಬೇರೆಡೆಗೆ ಸ್ಥಳಾಂತರಿಸುವಂತೆ ಕೋರಿದರು. ಮುಂದುವರೆದು, ಈ ಮೊದಲು ಸದರಿ ಪ್ರದೇಶದಲ್ಲಿ ಕೇವಲ 90 ರಿಂದ 110 ಅಡಿ ಯಲ್ಲಿ ಬೋರವೆಲ್ ಗಳಲ್ಲಿ ನೀರು ದೊರಕುತ್ತಿತ್ತು, ಆದರೆ ಸದರಿ ಗಣಿಗಾರಿಕೆ ನಡೆಸುತ್ತಿರುವುದರಿಂದ ಸುತ್ತಮುತ್ತಲಿನ ಕೃಷಿ ಜಮೀನಿನಲ್ಲಿರುವ ಬೋರವೆಲ್ ಗಳಲ್ಲಿ ನೀರಿನ ಕೊರತೆ ಉಂಟಾಗುತ್ತಿದೆ ಎಂದು ತಿಳಿಸಿದರು. ಗಣಿಗಾರಿಕೆ ನಡೆಸುವುದರಿಂದ ಭೂಮಿಯು ಕಂಪಿಸುತ್ತದೆ ಇದರಿಂದ ಕೃಷಿ ಚಟುವಟಿಕೆ ನಡೆಸಲು ತೊಂದರೆಯಾಗುತ್ತದೆ ಎಂದು ತಿಳಿಸಿದರು. ಗಣಿಗಾರಿಕೆ ನಡೆಸುವ ಮಾಲೀಕರು ರೈತರ ಸಮಸ್ಯೆಗಳನ್ನು ಇದುವರೆಗೂ ಆಲಿಸಿರುವುದಿಲ್ಲ ಎಂದು ತಿಳಿಸಿ ಗಣಿಗಾರಿಕೆ ನಡೆಸಿ ಸುತ್ತ-ಮುತ್ತಲಿನ ಪರಿಸರವನ್ನು ಹಾಳು ಮಾಡುವುದು ಬೇಡ ಎಂದು ತಿಳಿಸಿ ಈ ಪ್ರಸ್ಥಾವಿತ ಯೋಜನೆಗೆ ತಮ್ಮ ವಿರೋಧವನ್ನು ವ್ಯಕ್ತ ಪಡಿಸಿದರು.

4. **ಶ್ರೀ ಶಂಕ್ರಪ್ಪ, ಜಾನುಕುಂಟೆ ಗ್ರಾಮ ಗ್ರಾಮ,** ಇವರು ಮಾತನಾಡುತ್ತಾ, ಗಣಿಗಾರಿಕೆ ನಡೆಸುವಾಗ ಉಂಟಾಗುವ ಧೂಳು ಗಣಿಗಾರಿಕೆ ನಡೆಸುವ ಪ್ರದೇಶದಿಂದ ಕೇವಲ 200 ಮೀಟರ್ ಅಂತರಲ್ಲಿರುವ ತಮ್ಮ ಗ್ರಾಮದ ಹೈಸ್ಕೂಲ್ ಆವರಣದಲ್ಲಿ ಬಿದ್ದಿರುವುದಾಗಿ ತಿಳಿಸಿದರು. ಧೂಳನ್ನು ತೆರವುಗೊಳಿಸುವಂತೆ ಮನವಿ ಮಾಡಿದರು ಸಂಬಂಧಪಟ್ಟವರು ಇದುವರೆಗೂ ಯಾವದೇ ಕ್ರಮ ಕೈಗೊಂಡಿರುವುದಿಲ್ಲ ಎಂದು ತಿಳಿಸಿದರು. ಮುಂದುವರೆದು, ತಮ್ಮ ಗ್ರಾಮಕ್ಕೆ ಯಾವುದೇ ರೀತಿಯ ಮೂಲಭೂತ ಸೌಕರ್ಯ ಒದಗಿಸುವುದಿಲ್ಲ. ಶಾಲಾ ಮಕ್ಕಳಿಗೆ ಪುಸ್ತಕ, ಬ್ಯಾಗ್ ಮುಂತಾದವುಗಳನ್ನು ವಿತರಣೆ ಮಾಡಿರುವುದಿಲ್ಲ ಎಂದು ತಿಳಿಸಿದರು. ಸಮೀಪದ 05 ಹಳ್ಳಿಗಳ ಸ್ಥಳೀಯರಿಗೆ ಗಣಿಗಾರಿಕೆ ನಡೆಸುವ ಮಾಲೀಕರು ಅನುಕೂಲ ಮಾಡಿ, ಗ್ರಾಮಗಳನ್ನು ಅಭಿವೃದ್ಧಿ ಮಾಡಿದರೆ ಮಾತ್ರ ಸದರಿ ಯೋಜನೆಗೆ ಅವಕಾಶ ನೀಡುವಂತೆ ತಿಳಿಸಿದರು.

5. **ಶ್ರೀ ನಾಗರಾಜ ನಾಯ್ಕ ಬೆಳಗಲ್ಲು ತಾಂಡಾ,** ಇವರು ಮಾತನಾಡುತ್ತಾ, ಗಣಿಗಾರಿಕೆ ನಡೆಸುವ ಮಾಲೀಕರು ಸ್ಥಳೀಯರಿಗೆ ಮೊದಲ ಆದ್ಯತೆ ನೀಡುವಂತೆ ಕೋರಿದರು. ಗಣಿಗಾರಿಕೆಯಿಂದ ತೆರಿಗೆ ಬರುವುದಲ್ಲದೆ ಹಳ್ಳಿಗೆ ಆದಾಯ ಬರುವುದಾಗಿ ತಿಳಿಸಿದರು. ಯೋಜನಾ ಪ್ರದೇಶದಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸುವಂತೆ ತಿಳಿಸಿದರು. ಗಣಿಗಾರಿಕೆ ನಡೆಸುವ ಸಮಯದಲ್ಲಿ

ಉಂಟಾಗುವ ಶಬ್ದದ ಪ್ರಮಾಣವನ್ನು ಕಡಿಮೆಗೊಳಿಸುವಂತೆ ಕೋರಿದರು. ಹಾಗೂ ಹೆಚ್ಚು ಗಿಡಗಳನ್ನು ಬೆಳೆಸುವಂತೆ ತಿಳಿಸಿದರು.

6. **ಶ್ರೀ.ಬಿ.ವಿ.ರೆಡ್ಡಿ ಪರಿಸರವಾದಿಗಳು, ಬಳ್ಳಾರಿ** ಇವರು ಮಾತನಾಡುತ್ತಾ, ಗಣಿಗಾರಿಕೆ ನಡೆಸುವುದರಿಂದ ಉಂಟಾಗುವ ತೊಂದರೆ/ಸಮಸ್ಯೆ ಗಳನ್ನು ಬಗೆಹರಿಸಲು ಗಣಿ ಮಾಲೀಕರು, ಸ್ಥಳೀಯ ಮುಖಂಡರನ್ನೊಳಗೊಂಡ ಸಮಿತಿ ಯನ್ನು ರಚಿಸಿ ಸ್ಥಳೀಯ ಸಮಸ್ಯೆಗಳನ್ನು ಬಗೆಹರಿಸುವಂತೆ ತಿಳಿಸಿದರು. ಗಣಿಗಾರಿಕೆಯಿಂದ ಉದ್ಯೋಗ ಸಿಗುತ್ತದೆ ಮತ್ತು ಗಣಿ ಮಾಲೀಕರು ನಿಯಮಿತವಾಗಿ ಸ್ಥಳೀಯರಿಗೆ ಅನುಕೂಲವಾಗವಂತೆ ಆರೋಗ್ಯ ಶಿಬಿರಗಳನ್ನು ಆಯೋಜಿಸುವಂತೆ ತಿಳಿಸಿದರು. ಗಣಿ ನಡೆಸುವ ಪ್ರದೇಶದ ಸುತ್ತಮುತ್ತ ನಿಯಮಿತವಾಗಿ ನೀರಿನ ಸಿಂಪಡಣೆ ಮಾಡುವಂತೆ ಅತಿ ಹೆಚ್ಚು ಸಸಿಗಳನ್ನು ನೆಟ್ಟು ಹಸಿರು ವಲಯ ಅಭಿವೃದ್ಧಿ ಪಡಿಸುವಂತೆ ತಿಳಿಸಿ ಯೋಜನೆಯನ್ನು ಸ್ವಾಗತಿಸಿದರು.

7. **ಶ್ರೀ ವೀರುಪಾಕ್ಷ ಬಿ.ಬೆಳಗಲ್ಲು ಗ್ರಾಮ,** ಇವರು ಮಾತನಾಡುತ್ತಾ, ಕೈಗಾರಿಕೆಗಳಿಂದ ಸ್ಥಳೀಯರಿಗೆ ಯಾವುದೇ ಅನುಕೂಲವಾಗಿಲ್ಲ ಎಂದು ತಿಳಿಸಿದರು. ಕೈಗಾರಿಕೋದ್ಯಮಿಗಳು ಅಭಿವೃದ್ಧಿ ಮಾಡುವ ನೆಪದಲ್ಲಿ ಬೆಳಗಲ್ಲು ಗ್ರಾಮವನ್ನು ದುರುಪಯೋಗ ಮಾಡಿಕೊಂಡಿದ್ದಾರೆ ಎಂದು ತಿಳಿಸಿದರು. ಮುಂದುವರೆದು, ಗಣಿಗಾರಿಕೆಯವರು ಧೂಳಿನ ಪರಿಹಾರವನ್ನು ಪೂರ್ಣ ಪ್ರಮಾಣದಲ್ಲಿ ನಿಡಿರುವುದಿಲ್ಲ ಎಂದು ತಿಳಿಸಿದರು. ಗಣಿಗಾರಿಕೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕನಿಷ್ಠ ವೇತನ ನೀಡುತ್ತಿದ್ದು ವೇತನದಲ್ಲಿ ಯಾವುದೇ ಹೆಚ್ಚಳ ಮಾಡಿರುವುದಿಲ್ಲ ಎಂದು ತಿಳಿಸಿದರು. ಅಲ್ಲದೆ ಸ್ಥಳೀಯ ವಿದ್ಯಾರ್ಥಿಗಳಿಗೆ ಸ್ಥಳೀಯ ರೈತರಿಗೆ ಯಾವುದೇ ಅನುಕೂಲವಾಗಿಲ್ಲ ಎಂದು ಸಹ ತಿಳಿಸಿದರು.

8. **ಶ್ರೀ ಕನ್ನೇನಾಯ್ಕ್, ರೈತ ಸಂಘದ ಅಧ್ಯಕ್ಷರು, ಬೆಳಗಲ್ಲು ತಾಂಡಾ,**ರವರು ಮಾತನಾಡುತ್ತಾ ಕೈಗಾರಿಕೆಗಳಲ್ಲಿರುವ ಕಾಂಟ್ರಾಕ್ಟ್ ವ್ಯವಸ್ಥೆಯನ್ನು ರದ್ದುಗೊಳಿಸುವಂತೆ ಕೋರಿದರು. ಇದಕ್ಕೆ ಪ್ರತಿಕ್ರಿಯಿಸಿದ ಮಾನ್ಯ ಅಪರ ಜಿಲ್ಲಾಧಿಕಾರಿಗಳು, ಸ್ಪಾಂಜ್ ಐರನ್ ಘಟಗಳಿಗೆ ಸಂಬಂಧಿಸಿದ ವಿಷಯಗಳನ್ನು ಇಲ್ಲಿ ಪ್ರಸ್ತಾಪಿಸದೆ ಸದರಿ ಗಣಿಗಾರಿಕೆ ಸಂಬಂಧಿಸಿದ ಅಭಿಪ್ರಾಯವನ್ನು ನೀಡುವಂತೆ ತಿಳಿಸಿದರು. ಅಲ್ಲದೆ ಗ್ರಾಮಕ್ಕೆ ಸಂಬಂಧಿಸಿದ ಸಮಸ್ಯೆಗಳಿದ್ದರೆ ಸಾರ್ವಜನಿಕ ಕುಂದುಕೊರತೆ ಆಲಿಕೆ ಸಭೆಯಲ್ಲಿ ಮಾತನಾಡುವಂತೆ ತಿಳಿಸಿದರು.

9. **ಶ್ರೀ ನಾಗರಾಜ ನಾಯ್ಕ ಬೆಳಗಲ್ಲು ತಾಂಡಾ** ಇವರು ಮಾತನಾಡುತ್ತಾ ಕೈಗಾರಿಕೆಗಳಿಂದ ಉಂಟಾಗುವ ಸಮಸ್ಯೆಗಳ ಕುರಿತು ತಮ್ಮ ಬಳಿ ವೀಡಿಯೋ ಇದ್ದು ಅದನ್ನು ಸಭೆಗೆ ತೋರಿಸಲು ಅನುಕೂಲ ಮಾಡಿಕೊಡುವಂತೆ ಮನವಿ ಮಾಡಿದರು. ಸದರಿ ಗಣಿಗಾರಿಕೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಮಾತವಾಡುವಂತೆ ಮಾನ್ಯ ಅಪರ ಜಿಲ್ಲಾಧಿಕಾರಿಗಳು ತಿಳಿಸಿದಾಗ ಪ್ರಸ್ಥಾಪಿತ ಯೋಜನೆಯ ಬಗ್ಗೆ ತಮಗೆ ಯಾವುದೆ ಮಾಹಿತಿ ಇಲ್ಲವೆಂದು ತಿಳಿಸಿ ಶ್ರೀ ನಾಗರಾಜ ನಾಯ್ಕ ರವರು ಮಾತನಾಡುವುದನ್ನು ಅಲ್ಲಿಗೆ ಮುಕ್ತಾಯಗೊಳಿಸಿದರು.

10. **ಶ್ರೀ ಗೋವಿಂದ ನಾಯ್ಕ, ವಕೀಲರು ಬೆಳಗಲ್ಲು ತಾಂಡಾ,** ಇವರು ಮಾತನಾಡುತ್ತಾ, ಸದರಿ ಬೆಣಚುಕಲ್ಲು/ಸ್ಪಟಿಕಶಿಲೆಗಳ ಗಣಿಗಾರಿಕೆ ಮಾಡುವುದರಿಂದ ಈ ಭಾಗದ ಸುಮಾರು ಕುಟುಂಬಗಳಿಗೆ ಕೆಲಸ ದೊರೆಯುತ್ತದೆ ಎಂದು ತಿಳಿಸಿದರು. ಅಲ್ಲದೆ,ಬೆಣಚುಕಲ್ಲು/ಸ್ಪಟಿಕಶಿಲೆಗಳ ಗಣಿಗಾರಿಕೆ ನಡೆಸುವುದರಿಂದ ಸರ್ಕಾರಕ್ಕೂ ಸಹ ರಾಜಧನ ದೊರೆಯುತ್ತದೆ ತಿಳಿಸಿದರು.

ಮುಂದುವರೆದು, ಸಾರ್ವಜನಿಕ ಆಲಿಕೆ ಸಭೆಯನ್ನು ಯೋಜನಾ ಪ್ರದೇಶದಲ್ಲಿ ಆಯೋಜಿಸುವುದರ ಬದಲು ಬೆಳಗಲ್ಲು ತಾಂಡಾದಲ್ಲಿ ನಡೆಸುವಂತೆ ಕೋರಿದರು. ಹಾಗೂ ಸದರಿ ಗಣಿಗಾರಿಕೆ ನಡೆಸಲು ತಮ್ಮ ಅಭ್ಯಂತರವಿರುವುದಿಲ್ಲ ಎಂದು ತಿಳಿಸಿದರು.

11. **ಶ್ರೀ ಶಂಕರ ನಾಯ್ಕ, ನಿವೃತ್ತ ಅಧೀಕ್ಷಕರು, ರೇಷ್ಮೆ ಇಲಾಖೆ, ಬಳ್ಳಾರಿ.** ರವರು ಮಾತನಾಡುತ್ತಾ ಪ್ರಸ್ತುತ ಕರೋನಾ ಮಹಾಮಾರಿಯಿಂದ ದೇಶದ ಆರ್ಥಿಕ ವ್ಯವಸ್ಥೆಯನ್ನು ಅಸ್ಥವೆಸ್ಥಗೊಳಿಸಿದೆ. ಕುಂಟಿತವಾಗಿದ್ದು, ಕಾರ್ಮಿಕರು ಬಿದಿಪಾಲಾಗಿದ್ದಾರೆ. ಇಂತಹ ಸಣ್ಣ ಪ್ರಮಾಣದ ಗಣಿಗಾರಿಕೆ/ಕೈಗಾರಿಕೆಗಳಿಗೆ ಉತ್ತೇಜನ ನೀಡುವದರಿಂದ ಆರ್ಥಿಕ ವ್ಯವಸ್ಥೆಯಲ್ಲಿ ಸ್ವಲ್ಪ ಮಟ್ಟದ ಚೇತರಿಕೆ ಉಂಟಾಗುತ್ತದೆ ಎಂದು ತಿಳಿಸಿ ಗಣಿಗಾರಿಕೆಯನ್ನು ಅನುಮತಿ ನೀಡುವಂತೆ ತಿಳಿಸಿ ಸದರಿ ಯೋಜನೆಯನ್ನು ಸ್ವಾಗತಿಸಿದರು.

12. **ಶ್ರೀ ಸಿದ್ದೇಶ ಎನ್**.ಯು.ರಾಜಪುರ ಗ್ರಾಮ, ಸಂಡೂರು ತಾಲ್ಲೂಕ ರವರು ಮಾತನಾಡುತ್ತಾ, ಸದರಿ ಯೋಜನೆಯಿಂದ ಪರಿಸರಕ್ಕೆ ಯಾವುದೇ ತೊಂದರೆ ಉಂಟಾಗುವುದಿಲ್ಲ ಎಂದು ತಿಳಿಸಿದರು. ಪ್ರಸ್ತಾಪಿತ ಯೋಜನೆಯಿಂದ ನಿರುದ್ಯೋಗ ಸಮಸ್ಯೆಯನ್ನು ಬಗೆಹರಿಸಬಹುದು ಎಂದು ತಿಳಿಸಿದರು. ಮುಂದುವರೆದು, ಗಣಿಗಾರಿಕೆ ನಡೆಸುವವರು ಬೇರೆ ರಾಜ್ಯದವರಿಗೆ ಉದೋಗ ನೀಡದೆ ಸ್ಥಳೀಯರಿಗೆ ಮೊದಲ ಆದ್ಯತೆ ನೀಡುವಂತೆ ಕೋರಿದರು. ಗಣಿಮಾಲೀಕರು ಸ್ಥಳೀಯರಿಗೆ ಶೈಕ್ಷಣಿಕ ಚಟುವಟಿಕೆ ಮತ್ತು ಕ್ರೀಡಾ ಸೌಲಭ್ಯಗಳನ್ನು ಒದಗಿಸುವಂತೆ ಕೋರಿದರು. ಅಲ್ಲದೆ ಸ್ಥಳೀಯರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ತಿಳಿಸಿ ಯೋಜನೆಯನ್ನು ಸ್ವಾಗತಿಸಿದರು.

13. **ಶ್ರೀ ರಾಮು ನಾಯ್ಕ,** ಸಂತ ಸೇವಾಲಾಲ್ ಸಂಘದ ಜಿಲ್ಲಾಧ್ಯಕ್ಷರು, ಬೆಳಗಲ್ಲು ತಾಂಡಾ, ರವರು ಮಾತನಾಡುತ್ತಾ, ಸದರಿ ಯೋಜನೆಯಿಂದ ಸ್ಥಳೀಯರಿಗೆ ಹೆಚ್ಚಿನ ಉದ್ಯೋಗಾವಕಾಶ ದೊರೆಯುತ್ತದೆ ಎಂದು ತಿಳಿಸಿದರು. ಮುಂದುವರೆದು, ಮಾತನಾಡುತ್ತಾ ಸ್ಥಳೀಯ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಗಣಿ ಬಾಧ್ಯತಾ ಹಣದಲ್ಲಿ ಗ್ರಾಮಗಳಿಗೆ ಬೇಕಾಗುವ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವಂತೆ ಮನವಿ ಮಾಡುತ್ತಾ ಈ ಕುರಿತು ತಾವು ಸಹ ಪ್ರಯತ್ನ ಪಡುವುದಾಗಿ ಯೋಜನೆಯನ್ನು ಸ್ವಾಗತಿಸಿದರು.

14. **ಶ್ರೀ ನಾಗರಾಜ, ರಾಂಪುರ ಗ್ರಾಮ,** ಮೊಳಕಾಲ್ಮೂರು ತಾಲ್ಲೂಕು, ರವರು ಮಾತನಾಡುತ್ತಾ, ಗಣಿಗಾರಿಕೆ ನಡೆಸುವುದರಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ದೊರೆಯುತ್ತದೆ ಎಂದು ತಿಳಿಸಿದರು. ಅಲ್ಲದೆ ಗಣಿಗಾರಿಕೆ ನಡೆಸುವ ಪ್ರದೇಶದಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡುವುದರಿಂದ ಸ್ಥಳೀಯರು ಉದ್ಯೋಗವನ್ನರಸಿ ಬೇರೆ ಪ್ರದೇಶಗಳಿಗೆ ವಲಸೆ(ಗೂಳೆ) ಹೋಗುವುದು ತಪ್ಪುತ್ತದೆ ಎಂದು ತಿಳಿಸಿದರು. ಸದರಿ ಗಣಿಗಾರಿಕೆಯು ಬಿಳಿಕಲ್ಲು ಗಣಿಗಾರಿಕೆಯಾಗಿರುವದರಿಂದ ಧೂಳಿನ ಸಮಸ್ಯೆ ಮತ್ತು ಪರಿಸರ ಮಾಲಿನ್ಯ ಉಂಟಾಗುವ ಸಂಭವ ಕಡಿಮೆಯಿದೆ ಎಂದು ತಿಳಿಸಿ ಪ್ರಸ್ತಾಪಿತ ಯೋಜನೆಯನ್ನು ಸ್ವಾಗತಿಸಿದರು.

15. **ಶ್ರೀ ನಾಗರಾಜ ನಾಯ್ಕ ಬೆಳಗಲ್ಲು ತಾಂಡಾ** ರವರು ಮತ್ತೋಮ್ಮೆ ಮಾತನಾಡುತ್ತಾ, ಬೆಳಗಲ್ಲು ತಾಂಡಾದಲ್ಲಿ ಸುಮಾರು 100 ರಿಂದ 150 ಜನ ಕಬ್ಬು ಕಟಾವು ಮಾಡಲು ಬೇರೆ ಪ್ರದೇಶಗಳಿಗೆ ಹೋಗಿದ್ದಾರೆಂದು ತಿಳಿಸಿ ಸದರಿ ಗಣಿಗಾರಿಕೆಯನ್ನು ಪ್ರಾರಂಭಿಸುವುದರಿಂದ ಅವರೆಲ್ಲರಿಗೂ

ಇಲ್ಲಿಯೇ ಕೆಲಸ ದೊರಕುತ್ತದೆ ಎಂದು ತಿಳಿಸಿ ಪ್ರಾಸ್ತಾಪಿತ ಗಣಿಗಾರಿಕೆ ನಡೆಸಲು ಅವಕಾಶ ಮಾಡಿಕೊಡುವಂತೆ ಕೋರಿದರು.

16. **ಶ್ರೀ ಸೋಮಶೇಖರಗೌಡ,** ರವರು ಮಾತನಾಡುತ್ತಾ, ಸದರಿ ಪ್ರದೇಶದಲ್ಲಿ ಗಣಿಗಾರಿಕೆ ನಡೆಸುವುದರಿಂದ ಪಕ್ಕದಲ್ಲಿರುವ ಕರಿಬೇವಿನ ತೋಟಕ್ಕೆ ಹಾನಿಯಾಗುತ್ತದೆಂದು ತಿಳಿಸಿದರು. ಮುಂದುವರೆದು, ಗಣಿಗಾರಿಕೆಯಿಂದ ಸುತ್ತಮುತ್ತಲಿನ ಕೃಷಿ ಜಮೀನಿನಲ್ಲಿರುವ ಬೋರವೆಲ್ ಗಳಲ್ಲಿ ನೀರಿನ ಕೊರತೆ ಉಂಟಾಗುತ್ತದೆ ಎಂದು ತಿಳಿಸಿದರು.ಆದುದರಿಂದ ಗಣಿಗಾರಿಕೆ ನಡೆಸುವುದರಿಂದ ಉಂಟಾಗುವ ಸಾಧಕ ಬಾಧಕಗಳನ್ನು ಪರಿಶೀಲಿಸಿ ಗಣಿಗಾರಿಕೆ ನಡೆಸಲು ಅನುಮತಿ ನೀಡಬೇಕೆಂದು ಕೋರಿದರು.

ಕೊನೆಯಲ್ಲಿ ಸಾರ್ವಜನಿಕ ಆಲಿಕೆ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ ಪಿ.ಎಸ್.ಮಂಜುನಾಥ ಕೆ.ಎ.ಎಸ್.( ಹಿರಿಯ ಶ್ರೇಣಿ) ಅಪರ ಜಿಲ್ಲಾಧಿಕಾರಿಗಳು ಮತ್ತು ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಇವರು ತಮ್ಮ ಅಧ್ಯಕ್ಷೀಯ ಮಾತುಗಳನ್ನಾಡುತ್ತ, ಸದರಿ ಸಭೆಯು ಪರಿಸರ ಸಾರ್ವಜನಿಕ ಸಭೆಯಾಗಿದ್ದು, ಇದರಲ್ಲಿ ಎಲ್ಲರಿಗೂ ಮಾತನಾಡಲು ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ. ಹಾಗು ತಾವು ಮಾತನಾಡಿದ ಪರ/ವಿರೋಧ ಅಭಿಪ್ರಾಯಗಳನ್ನು ದಾಖಲಿಸಲಾಗಿದೆ. ಉದ್ದಿಮೆಯವರು ದಿನಾಂಕ:05-11-2020 ರಂದು ಜಿಲ್ಲಾಧಿಕಾರಿಯವರಿಗೆ ಪತ್ರ ನೀಡಿದ್ದು ಪ್ರತಿ ವರ್ಷ ಸಿ.ಎಸ್.ಆರ್. ಅಡಿಯಲ್ಲಿ ರೂ 10,00,000/- ವಿನಿಯೋಗಿಸುವುದಾಗಿ ತಿಳಿಸಿರುತ್ತಾರೆ. ಪ್ರತಿಯನ್ನು **ಅನುಬಂಧ-5** ರಲ್ಲಿ ಲಗತ್ತಿಸಲಾಗಿದೆ. ಈ ಸಭೆಯಲ್ಲಿ ನಾವುಗಳು ಯಾವುದೇ ತಿರ್ಮಾನ ತೆಗೆದುಕೊಳ್ಳುವದಿಲ್ಲ, ಈ ಸಭೆಯ ಉದ್ದೇಶ ಸಾರ್ವಜನಿಕರ ಅಭಿಪ್ರಾಯ ಹಾಗೂ ಸಲ್ಲಿಸಿರುವ ಮೌಖಿಕ ಮತ್ತು ಲಿಖಿತ ಅಭಿಪ್ರಾಯಗಳನ್ನು ಸಂಗ್ರಹಿಸಿ, ಹಾಗೂ ತಾವುಗಳು ಸಲ್ಲಿಸಿರುವ ಮನವಿಗಳು, ಹೆಚ್ಚಿನ ಸಂಖ್ಯೆಯ ಲಿಖಿತ ಅಭಿಪ್ರಾಯಗಳು/ ಸಲಹೆಗಳು/ಆಕ್ಷೇಪಣೆಗಳನ್ನು ಸ್ವೀಕರಿಸಿದ್ದೇವೆ. ಅದನ್ನು ದಾಖಲಿಸಲಾಗುವುದು. ಈ ಸಭೆಯ ನಡವಳಿಯನ್ನು ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ದಾಖಲಿಸಿ, ಛಾಯಚಿತ್ರ (ಪ್ರತಿಯನ್ನು **ಅನುಬಂಧ-7** ರಲ್ಲಿ ಲಗತ್ತಿಸಲಾಗಿದೆ) ಹಾಗೂ ವಿಡೀಯೋ ದಾಖಲಾತಿಗೊಳಂದಿಗೆ (ಪ್ರತಿಯನ್ನು **ಅನುಬಂಧ-8** ರಲ್ಲಿ ಲಗತ್ತಿಸಲಾಗಿದೆ) ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಅರಣ್ಯ, ಜೀವಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು. ಇವರಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕೇಂದ್ರ ಕಛೇರಿ ಬೆಂಗಳೂರು ಇವರ ಮುಖಾಂತರ ಕಳುಹಿಸಿಕೊಡಲಾಗುವದು ಎಂದು ತಿಳಿಸಿದರು.

ಈ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡ ಎಲ್ಲಾ ಸಾರ್ವಜನಿಕರಿಗೆ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರಿಗೆ ಧನ್ಯವಾದಗಳನ್ನು ತಿಳಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು.

**(ಶ್ರೀ ಕೆ.ರಾಜು)**
**ಹಿರಿಯ ಪರಿಸರ ಅಧಿಕಾರಿ(ಪ್ರಭಾರ)**
**ಕರಾಮಾನಿಮಂ.ವಲಯ ಕಛೇರಿ ಬಳ್ಳಾರಿ**

**(ಶ್ರೀ ಪಿ.ಎಸ್. ಮಂಜುನಾಥ, ಕೆ.ಎ.ಎಸ್.(ಹಿರಿಯ ಶ್ರೇಣಿ))**
**ಅಪರ ಜಿಲ್ಲಾಧಿಕಾರಿಗಳು ಅಧ್ಯಕ್ಷರು**
**ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ ಸಮಿತಿ,**
**ಬಳ್ಳಾರಿ.**

## ಅನುಬಂಧ

1. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಅಧಿಕಾರಿಗಳ ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ-1** ರಲ್ಲಿ ಲಗತ್ತಿಸಲಾಗಿದೆ.
2. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಸಾರ್ವಜನಿಕರ ವಿಳಾಸ ಮತ್ತು ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ-2** ರಲ್ಲಿ ಲಗತ್ತಿಸಲಾಗಿದೆ.
3. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ ರವರ ಅಧಿಕೃತ ಜ್ಞಾಪನ ಪತ್ರ ದಿನಾಂಕ: 13-11-2020 ರ ಅನ್ವಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು ಬಳ್ಳಾರಿ ಇವರಿಗೆ ಅಧಿಕಾರ ನೀಡಿ ಪರಿಸರ ಸಾರ್ವಜನಿಕ ಸಭೆಯನ್ನು ನಡೆಸಲು ಕ್ರಮವಹಿಸಲು ತಿಳಿಸಿರುವ ಪತ್ರವನ್ನು. **ಅನುಬಂಧ-3** ರಲ್ಲಿ ಲಗತ್ತಿಸಲಾಗಿದೆ.
4. ಸಾರ್ವಜನಿಕರಿಂದ ಸ್ವೀಕೃತಿಯಾದ ಒಟ್ಟು **43 ಲಿಖಿತ ಹೇಳಿಕೆ/ ಆಕ್ಷೇಪಣೆಯನ್ನು ಅನುಬಂಧ-4** ರಲ್ಲಿ ಲಗತ್ತಿಸಲಾಗಿದೆ.
5. ಸಿ.ಎಸ್.ಆರ್.ಅಡಿಯಲ್ಲಿ ಉದ್ದಿಮೆಯವರು ದಿನಾಂಕ: 05-11-2020 ರಂದು ಜಿಲ್ಲಾಧಿಕಾರಿಯವರಿಗೆ ಸಲ್ಲಿಸಿರುವ ಪತ್ರದ ಪ್ರತಿ **ಅನುಬಂಧ-5** ರಲ್ಲಿ ಲಗತ್ತಿಸಿದೆ.
6. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪ್ರಚಾರಕ್ಕಾಗಿ ದಿನಾಂಕ 02-01-2021 ರಂದು ಕರಪತ್ರಗಳನ್ನು ವಿತರಿಸಲಾದ ಮತ್ತು ಧ್ವನಿವರ್ಧಕಗಳ ಮುಖೇನ ಯೋಜನಾ ಸ್ಥಳದ ಸುತ್ತಮುತ್ತಲ ಗ್ರಾಮಗಳಲ್ಲಿ ಸಾರ್ವಜನಿಕವಾಗಿ ಪ್ರಚಾರ ಮಾಡಲಾದ ಸಮಯದಲ್ಲಿ ತೆಗೆದುಕೊಂಡ ಛಾಯಾಚಿತ್ರಗಳ ಪ್ರತಿಯನ್ನು **ಅನುಬಂಧ-6** ರಲ್ಲಿ ಲಗತ್ತಿಸಲಾಗಿದೆ.
7. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪ್ರಕ್ರಿಯೆಯ ಛಾಯಾಚಿತ್ರಗಳ ಪ್ರತಿಯನ್ನು **ಅನುಬಂಧ-7** ರಲ್ಲಿ ಲಗತ್ತಿಸಲಾಗಿದೆ.
8. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಆಡಿಯೋ ಮತ್ತು ವಿಡಿಯೋ ಇರುವ ಸಿ.ಡಿ. ಗಳ ಪ್ರತಿಯನ್ನು **ಅನುಬಂಧ-8** ರಲ್ಲಿ ಲಗತ್ತಿಸಲಾಗಿದೆ.

(ಶ್ರೀ ಕೆ.ರಾಜು)
**ಹಿರಿಯ ಪರಿಸರ ಅಧಿಕಾರಿ(ಪ್ರಭಾರ)**
**ಕ.ರಾ.ಮಾ.ನಿ.ಮಂ.ವಲಯ ಕಛೇರಿ ಬಳ್ಳಾರಿ**

**(ಶ್ರೀ ಪಿ.ಎಸ್. ಮಂಜುನಾಥ, ಕೆ.ಎ.ಎಸ್.(ಹಿರಿಯ ಶ್ರೇಣಿ))**
**ಅಪರ ಜಿಲ್ಲಾಧಿಕಾರಿಗಳು ಅಧ್ಯಕ್ಷರು**
**ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ ಸಮಿತಿ,**
**ಬಳ್ಳಾರಿ.**